# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯದರ್ಶಿ, ವಾರ್ಡ್ ಸಮಿತಿ /ಸಹಾಯಕ ಇಂಜಿನಿಯರ್‌ರವರ ಕಛೇರಿ, ವೃಷಭಾವತಿನಗರ ವಾರ್ಡ್–102,
3ನೇ ಮುಖ್ಯರಸ್ತೆ, ಬಿ.ಇ.ಎಮ್.ಎಲ್. ಲೇಔಟ್, ಬೆಂಗಳೂರು–79.

**ಸಂಖ್ಯೆ: ವಾ–102/ವಾ.ಸ./ಸಭಾನಡವಳಿ–06/2020–21** **ದಿನಾಂಕ: 19/12/2020**

**–:ಸಭೆಯ ನಡವಳಿಗಳು:–**

ಮಾನ್ಯ ನೋಡಲ್ ಅಧಿಕಾರಿಯವರ ಆದೇಶದಂತೆ, ದಿನಾಂಕ: 19/12/2020 ಶನಿವಾರದಂದು ಬೆಳಿಗ್ಗೆ 10.30 ಘಂಟೆಗೆ ವಾರ್ಡ್–102 ವೃಷಭಾವತಿನಗರದ ವಾರ್ಡ್ ಮಟ್ಟದ ಸಮಿತಿ ಸಭೆಯನ್ನು ಆಯೋಜಿಸಲಾಯಿತು.

ಶ್ರೀ ಜಿ.ಪ್ರಕಾಶ್ ಸಮಿತಿಯ ಕಾರ್ಯದರ್ಶಿಗಳು ರವರು ಸಭೆಯನ್ನು ನಡೆಸುತ್ತಾ, ಸಾರ್ವಜನಿಕರ ಕುಂದು ಕೊರತೆಗಳು ಹಾಗೂ ವಾರ್ಡ್ ಅಭಿವೃದ್ಧಿಗೆ ಸಂಬಂದಿಸಿದಂತೆ ಹಾಗೂ ಕೋವಿಡ್–19 ವೈರಸ್‌ನ ಸೋಂಕಿನ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು, ಮೂಲಭೂತ ಸೌಕರ್ಯಗಳನ್ನು ಒದಗಿಸಲು ಹಾಗೂ ಸಾರ್ವಜನಿಕರ ಹಿತರಕ್ಷಣೆಗಾಗಿ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಬಗ್ಗೆ ಚರ್ಚಿಸಲು ಸಭೆಯಲ್ಲಿ ಉಪಸ್ಥಿತರಾಗಿರುವ ಮಾನ್ಯ ನೋಡಲ್ ಅಧಿಕಾರಿಯವರಿಗೆ ಮತ್ತು ಸಭೆಗೆ ಆಗಮಿಸಿರುವ ಎಲ್ಲಾ ಅಧಿಕಾರಿಗಳಿಗೆ ಸಭೆಗೆ ಸ್ವಾಗತ ಕೋರುತ್ತಾ, ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು.

**ಸಭೆಗೆ ಹಾಜರಿದ್ದವರು:**

| | |
|---|---|
| 1 | ಶ್ರೀ. ಕೆ. ವಿಜಯ್ ಶೇಖರ್<br>ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್–102 |
| 2 | ಶ್ರೀ ಜಿ. ಪ್ರಕಾಶ್, ಕಾರ್ಯದರ್ಶಿ ಮತ್ತು ಸಂಚಾಲಕರು, ವಾರ್ಡ್ ಸಮಿತಿ ವಾ–102 ಹಾಗೂ ಸಹಾಯಕ ಅಭಿಯಂತರರು, ವಾರ್ಡ್–102. |
| 3 | ಶ್ರೀ ಜಿ.ಆರ್.ಗೋವಿಂದ ರಾಜುಲು, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್–102 |
| 4 | ಶ್ರೀ ಎಸ್.ಬಾಬು, ಕಿರಿಯ ಆರೋಗ್ಯ ಪರಿವೀಕ್ಷಕರು, (ಗುತ್ತಿಗೆ) ವಾರ್ಡ್–102 |
| 5 | ಶ್ರೀ ಕೆ.ವಿ. ಲೋಕೇಶ್, ಹಿರಿಯ ಪಶುವೈದ್ಯಕೀಯ ಪರಿವೀಕ್ಷಕರು |
| 6 | ಶ್ರೀ ಬಿ.ಆರ್.ಮಂಜುನಾಥ್, ಟ್ಯಾಕ್ಸ್ ಇನ್ಸ್‌ಪೆಕ್ಟರ್, ವಾರ್ಡ್–102 |
| 7 | ಶ್ರೀ ಕೆ.ಹೆಚ್.ದಿನೇಶ್, ಕಾಮಗಾರಿ ಪರಿವೀಕ್ಷಕರು, ಬಿ.ಡಬ್ಲ್ಯೂ.ಎಸ್.ಎಸ್.ಬಿ. |
| 8 | ಶ್ರೀ ಪ್ರಶಾಂತ್ ಎನ್, ಬಿಬಿಎಂಪಿ ಮಾರ್ಷಲ್. |
| 9 | ಶ್ರೀ ಕಾಳಿಂಗ ಮುತ್ತಯ್ಯ, ಎಎಸ್ಐ, ಕಾಮಾಕ್ಷಿಪಾಳ್ಯ |
| 10 | ಶ್ರೀ ಸಿದ್ದರಾಜು, ಸಹಾಯಕ ಅಭಿಯಂತರರು, ಎನ್–6, ಬೆಸ್ಕಾಂ |
| 11 | ಶ್ರೀಮತಿ ಪ್ರೇಮ, ಸದಸ್ಯರು, ವಾರ್ಡ್ ಸಮಿತಿ ವಾರ್ಡ್–102 |
| 12 | ಶ್ರೀಮತಿ ಕೆ. ಗೌರಿ, ಸದಸ್ಯರು, ವಾರ್ಡ್ ಸಮಿತಿ ವಾರ್ಡ್–102 |
| 13 | ಶ್ರೀ ಚಂದ್ರಪ್ಪ, ಸದಸ್ಯರು, ವಾರ್ಡ್ ಸಮಿತಿ ವಾರ್ಡ್–102 |
| 14 | ಶ್ರೀ ದೇವರಾಜು, ಸದಸ್ಯರು, ವಾರ್ಡ್ ಸಮಿತಿ ವಾರ್ಡ್–102 |
| 15 | ಶ್ರೀ ರಂಗನಾಥ್ ಸಿ. ಸದಸ್ಯರು, ವಾರ್ಡ್ ಸಮಿತಿ ವಾರ್ಡ್–102 |
| 16 | ಶ್ರೀಮತಿ ಸಿದ್ದಗಂಗಮ್ಮ, ಸದಸ್ಯರು, ವಾರ್ಡ್ ಸಮಿತಿ ವಾರ್ಡ್–102 |

ಮು.ತಿ.ನೋ.

Scanned with CamScanner

**ಸಭೆಯಲ್ಲಿ ಚರ್ಚಿಸಲಾದ ವಿಷಯಗಳು:**

1) **ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:-**

- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗದ ಪ್ರಸ್ತುತ ಸ್ಥಿತಿ ಹಾಗೂ ಕಳೆದ 15 ದಿನಗಳ ಮಾಹಿತಿಗಳ ವಿವರಣೆ ನೀಡಲು ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಿದರು.
- ಹಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡುತ್ತಾ, ಕಳೆದ ವಾರದಲ್ಲಿ ಕೋವಿಡ್-19 ಪ್ರಕರಣಗಳಿಗೆ ಸಂಭಂದಿಸಿದಂತೆ ವಾರ್ಡ್ ವ್ಯಾಪ್ತಿಯಲ್ಲಿ 01 ಸಂಖ್ಯೆ ಸಾವು ಸಂಭವಿಸಿರುತ್ತದೆ. ಎಂದು ಸಭೆಯಲ್ಲಿ ತಿಳಿಸಿದರು.
- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಕೋವಿಡ್-19 ಸೋಂಕಿತರ ಸಂಪರ್ಕಿತರನ್ನು ಗುರುತಿಸಲು ಟೀಚರ್ಸ್‌ಗಳನ್ನು ನೇಮಕ ಮಾಡಲಾಗಿದ್ದು, ಯಾವ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆಂದು ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಕೇಳಿದರು.
- ಹಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡುತ್ತಾ, ಮಾನ್ಯ ಕರ್ನಾಟಕ ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ/129/ರಾಸ/2020 ದಿನಾಂಕ:15.12.2020 ರಂತೆ ವಾರದ ಮೊದಲ ಮೂರು ದಿನಗಳಂದು ಅವರುಗಳು ತಮ್ಮ ಮಾತೃ ಇಲಾಖೆಯ ಕಛೇರಿಗಳಲ್ಲಿ ಹಾಗೂ ಉಳಿದ ಮೂರು ದಿನಗಳಂದು ಕೋವಿಡ್-19ರ ಕೆಲಸ ಕಾರ್ಯ ನಿರ್ವಹಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಿರುತ್ತಾರೆ. ಅದರಂತೆ ಸದರಿಯವರು ಕೆಲಸ ನಿರ್ವಹಣೆ ಮಾಡುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು.

2) **ಅಭಿಯಂತರರ ವಿಭಾಗದ ಬಗ್ಗೆ:-**

- ಶ್ರೀರಾಜ್‌ಕುಮಾರ್ ಹಾಗೂ ಇತರೆ ಸಭಾ ಸದಸ್ಯರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಕೆಲವು ರಸ್ತೆಗಳಲ್ಲಿ ಗುಂಡಿಗಳು ಬಿದ್ದಿರುವುದರಿಂದ ಡಾಂಬರೀಕರಣ ಕಾಮಗಾರಿಯನ್ನು ಪ್ರಾರಂಭಿಸುವಂತೆ ಸಭೆಯಲ್ಲಿ ಕೋರಿದರು.
- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಅನುಮೋದನೆಯಾಗಿರುವ ಕಾಮಗಾರಿಗಳಡಿಯಲ್ಲಿ ಆಯ್ದುಕೊಂಡಿರುವ ರಸ್ತೆಗಳ ಡಾಂಬರೀಕರಣವನ್ನು ಕೂಡಲೇ ಪ್ರಾರಂಭಿಸಬೇಕಾಗಿ ಸಭೆಯಲ್ಲಿ ಸಹಾಯಕ ಅಭಿಯಂತರರಿಗೆ ಸೂಚಿಸಿದರು.
- ಈಗಾಗಲೇ ವಾರ್ಡ್ ವ್ಯಾಪ್ತಿಯಲ್ಲಿ ಡಾಂಬರೀಕರಣ ಮಾಡಬೇಕಾಗಿರುವ ರಸ್ತೆಗಳನ್ನು ಗುರುತಿಸಲಾಗಿದ್ದು ಸದರಿ ಕಾಮಗಾರಿಗಳಿಗೆ ಅನುಮೋದನೆಯಾಗಿದ್ದು, ಕಾಮಗಾರಿಯನ್ನು ಪ್ರಾರಂಭಿಸಲಾಗುವುದು ಎಂದು ಸಹಾಯಕ ಅಭಿಯಂತರರು ಸಭೆಗೆ ತಿಳಿಸಿದರು.
- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಕಳೆದ ಸಭೆಯಲ್ಲಿ ಸೂಚಿಸಿದಂತೆ ಖಾಲೀ ನಿವೇಶನಗಳಲ್ಲಿರುವ ಕಸಗಳನ್ನು ಹಾಗೂ ಡೆಬ್ರಿಸ್‌ಗಳನ್ನು ತೆರವುಗಳಿಸಲು ತೆಗೆದುಕೊಂಡಿರುವ ಕ್ರಮದ ಬಗ್ಗೆ ವಿವರಿಸುವಂತೆ ಸಭೆಯಲ್ಲಿ ತಿಳಿಸಿದರು.
- ಸಹಾಯಕ ಅಭಿಯಂತರರು ಮಾತನಾಡುತ್ತಾ, ಕೆಲವು ಖಾಲೀ ನಿವೇಶನಗಳನ್ನು ಗುರುತಿಸಿದ್ದು, ಡೆಬ್ರಿಸ್ ತೆರವುಗೊಳಿಸಿರುತ್ತೇವೆ ಹಾಗೂ ಸೇಂಟ್ ಮೇರೀಸ್ ಶಾಲೆಯ ಹತ್ತಿರದ ಖಾಲೀ ಜಾಗದಲ್ಲಿ ಡೆಬ್ರಿಸ್ ತೆರವುಗೊಳಿಸಲು ಹೋದಾಗ ಸ್ವತ್ತಿನ ಮಾಲೀಕರುಗಳು ತೆರವುಗೊಳಿಸದಂತೆ ನಿರಾಕರಿಸಿರುತ್ತಾರೆ ಎಂದು ಸಭೆಯಲ್ಲಿ ತಿಳಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಕೆಲವು ಮಾದಕ ವ್ಯಸನಿಗಳು ದ್ವಿಚಕ್ರ ವಾಹನಗಳಲ್ಲಿ ಅತಿಯಾದ ವೇಗದಿಂದ ಸಂಚರಿಸುವುದು, ವೀಲಿಂಗ್ ಮಾಡುವುದು, ಹಾಗೂ ಸಾರ್ವಜನಿಕರಿಗೆ ತೊಂದರೆ ಕೊಡುವುದು, ಸರಗಳ್ಳತನ ಮಾಡುವುದು ಹೆಚ್ಚಾಗಿರುತ್ತದೆ. ಇದರಿಂದ ಸರ್ವಜನಿಕರಿಗೆ ತುಂಬಾತೊಂದರೆಯಾಗುತ್ತಿರುತ್ತದೆ. ಆದುದರಿಂದ ತುರ್ತಾಗಿ ಸಿಸಿಟಿವಿ ಕ್ಯಾಮೆರಗಳನ್ನು ವಾರ್ಡ್ ವ್ಯಾಪ್ತಿಯಲ್ಲಿ ಅಳವಡಿಸಲು ಕ್ರಮ ಕೈಗೊಳ್ಳುವಂತೆ ಸದಸ್ಯರಾದ ಶ್ರೀ ರಾಜ್‌ಕುಮಾರ್ ಹಾಗೂ ಶ್ರೀ ದೇವರಾಜ್ ಹಾಗೂ ಇತರೆ ಸದಸ್ಯರುಗಳು ಸಭೆಯಲ್ಲಿ ತಿಳಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಸಿಸಿಟಿವಿ ಅಳವಡಿಸುವ ಕಾಮಗಾರಿಗೆ ಸಂಬಂಧಿಸಿದಂತೆ ಸೂಕ್ಷ್ಮ ಪ್ರದೇಶಗಳ ಸ್ಥಳಗಳನ್ನು ಈಗಾಗಲೇ ಗುರುತಿಸಲಾಗಿದ್ದು, ಸದರಿ ಕಾಮಗಾರಿಗೆ ಅನುಮೋದನೆ ದೊರೆತ್ತಿದ್ದು, ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿದ್ದು, ಕಾರ್ಯಾದೇಶ ದೊರೆತ ನಂತರ ತುರ್ತಾಗಿ ಕಾಮಗಾರಿಯನ್ನು ನಿರ್ವಹಿಸಲಾಗುವುದೆಂದು ಸಹಾಯಕ ಅಭಿಯಂತರರು ಸಭೆಗೆ ತಿಳಿಸಿದರು.

ಮು.ತಿ.ನೋ.

Scanned with CamScanner

3) **ಘನತ್ಯಾಜ್ಯ ನಿರ್ವಹಣೆ ವಿಭಾಗದ ಬಗ್ಗೆ:-**

- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಕಳೆದ ಸಭೆಯಲ್ಲಿ ತಿಳಿಸಿದಂತೆ ವಾರ್ಡ್ ವ್ಯಾಪ್ತಿಯಲ್ಲಿ ಕಸಗಳನ್ನು ತೆರವುಗೊಳಿಸುವ ಬಗ್ಗೆ ನೀಡಿದ್ದ ದೂರಿನನ್ವಯ ತೆಗೆದುಕೊಂಡಿರುವ ಕ್ರಮದ ಬಗ್ಗೆ ವರದಿ ನೀಡುವಂತೆ ತಿಳಿಸಿದರು.
- ಸಹಾಯಕ ಅಭಿಯಂತರರು ವಾರ್ಡ್-102 ರವರು ಮಾತನಾಡುತ್ತಾ, ಕಳೆದ ಸಭೆಯಲ್ಲಿ ತಿಳಿಸಿದಂತೆ ಚರ್ಚ್ ರಸ್ತೆಯಲ್ಲಿ ಹಾಗೂ ವಿನಾಯಕನಗರ ಕುಡಿಯುವ ನೀರಿನ ಸ್ಥಾವರದ ಹತ್ತಿರ ಇದ್ದ ಕಸಗಳನ್ನು ಘನತ್ಯಾಜ್ಯ ನಿರ್ವಹಣೆ ವಿಭಾಗದ ವತಿಯಿಂದ ತೆರವುಗೊಳಿಸಲಾಗಿರುತ್ತದೆ ಸಭೆಯಲ್ಲಿ ತಿಳಿಸಿದರು.
- ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಮುಂದಿನ ದಿನಗಳಲ್ಲಿ ಸದರಿ ಜಾಗಗಳಲ್ಲಿ ಕಸಗಳನ್ನು ಹಾಕದಂತೆ ತಡೆಯಲು ನಾಮಫಲಕಗಳನ್ನು ಅಳವಡಿಸಲು ಕ್ರಮ ತೆಗೆದುಕೊಳ್ಳುವಂತೆ ಸಹಾಯಕ ಅಭಿಯಂತರರಿಗೆ ಸೂಚಿಸಿದರು.
- ಸಹಾಯಕ ಅಭಿಯಂತರರು ಮಾತನಾಡುತ್ತಾ, ನಾಮಫಲಕಗಳನ್ನು ಅಳವಡಿಸಲು ಘನತ್ಯಾಜ್ಯ ನಿರ್ವಹಣೆಯ ಅನುದಾನದಡಿಯಲ್ಲಿ ಅನುದಾನ ದೊರೆತ ನಂತರ ಕಾಮಗಾರಿಯನ್ನು ತುರ್ತಾಗಿ ಕೈಗೊಳ್ಳಲಾಗುವುದೆಂದು ಸಭೆಗೆ ತಿಳಿಸಿದರು.

4) **ಕಂದಾಯ ವಿಭಾಗದ ಬಗ್ಗೆ:-**

- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ವಾರ್ಡ್‌ನಲ್ಲಿ ಕಂದಾಯ ವಸೂಲಿ ಮಾಡಲು ತೆಗೆದುಕೊಂಡಿರುವ ಸೂಕ್ತ ಕ್ರಮಗಳ ಬಗ್ಗೆ ವರದಿಗಳನ್ನು ನೀಡುವಂತೆ ತಿಳಿಸಿದರು.
- ತೆರಿಗೆ ಪರಿವೀಕ್ಷಕರು ಮಾತನಾಡುತ್ತಾ, ವಾರ್ಡ್‌ನಲ್ಲಿ ಕಂದಾಯ ಸಂಗ್ರಹಣೆಯು ಸರಿಯಾದ ರೀತಿಯಲ್ಲಿ ನಡೆಯುತ್ತಿದ್ದು, ಕಂದಾಯ ಪಾವತಿಸದ ಕೆಲವು ಕಟ್ಟಡದ ಮಾಲೀಕರುಗಳಿಗೆ ನೋಟೀಸ್ ನೀಡುತ್ತಿರುವುದಾಗಿ ಹೇಳಿದರು.
- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಜಪ್ತಿ ಕಂದಾಯ ಪಾವತಿಸುವಂತೆ ಕಟ್ಟಡದ ಮಾಲೀಕರುಗಳಿಗೆ ನೋಟೀಸ್ ನೀಡಿ ನಿರಾಕರಿಸಿದ್ದಲ್ಲಿ ಜಪ್ತಿ ಮಾಡಲು ಸೂಚಿಸಿದರು.

5) **ಪಶುಪಾಲನೆ ವಿಭಾಗದ ಬಗ್ಗೆ:-**

- ಶ್ರೀಮತಿ ಪ್ರೇಮ ವಾರ್ಡ್ ಸಮಿತಿ ಸದಸ್ಯರು ಮಾತನಾಡುತ್ತಾ, ತೋಟದ ರಸ್ತೆಯಲ್ಲಿ ನಾಯಿಗಳ ಹಾವಳಿಯು ಹೆಚ್ಚಾಗಿರುವುದಾಗಿ ಸಭೆಯಲ್ಲಿ ದೂರಿದರು.
- ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಬೀದಿ ನಾಯಿಗಳ ಹಾವಳಿಯ ದೂರುಗಳ ಬಗ್ಗೆ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ವಿವರಿಸಲು ಸಭೆಯಲ್ಲಿ ಹಾಜರಿದ್ದ ಶ್ರೀ.ಕೆ.ವಿ.ಲೋಕೇಶ್ ವೆಟರಿನರಿ ಪರಿವೀಕ್ಷಕರಿಗೆ ಸೂಚಿಸಿದರು.
- ಅದರಂತೆ ಈಗಾಗಲೇ ವಾರ್ಡ್ ವ್ಯಾಪ್ತಿಯಲ್ಲಿರುವ ಬೀದಿ ನಾಯಿಗಳನ್ನು ಹಿಡಿಯುವ ಕಾರ್ಯವು ಪ್ರಗತಿಯಲ್ಲಿದ್ದು, ಸದರಿ ರಸ್ತೆಯಲ್ಲಿನ ಬೀದಿ ನಾಯಿಗಳನ್ನು ಗುರುತಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದು ಸಭೆಯಲ್ಲಿ ಶ್ರೀ.ಕೆ.ವಿ.ಲೋಕೇಶ್ ವೆಟರಿನರಿ ಪರಿವೀಕ್ಷಕರು ತಿಳಿಸಿದರು.
- ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಮುಂದಿನ ಸಭೆಯಲ್ಲಿ ಹಾಲೀ ಇರುವ ಕೋಳಿ, ಮೇಕೆ ಮತ್ತು ಮೀನು ಮಾಂಸದ ಮಾರಾಟಗಾರರು ಪರವಾನಗಿ ಪಡೆದಿರುವ ಬಗ್ಗೆ ಮಾಹಿತಿಗಳನ್ನು ನೀಡಲು ಶ್ರೀ.ಕೆ.ವಿ.ಲೋಕೇಶ್ ವೆಟರಿನರಿ ಪರಿವೀಕ್ಷಕರಿಗೆ ಸೂಚಿಸಿದರು.

6) **ಬಿ.ಡಬ್ಲ್ಯೂ.ಎಸ್.ಎಸ್.ಬಿ. ವಿಭಾಗದ ಬಗ್ಗೆ:-**

- ಶ್ರೀ ದೇವರಾಜುರವರು ಮಾತನಾಡುತ್ತಾ, ಎನ್.ಜಿ.ಓ.'ಸ್ ಕಾಲೋನಿಯಲ್ಲಿ ಕುಡಿಯುವ ನೀರಿನ ಸಮಸ್ಯೆಯು ಹೆಚ್ಚಾಗಿರುತ್ತದೆ ಎಂದು ಸಭೆಯಲ್ಲಿ ದೂರಿದರು.
- ಶ್ರೀ ದಿನೇಶ್ ಕಾಮಗಾರಿ ಪರಿವೀಕ್ಷಕರು ಬಿ.ಡಬ್ಲ್ಯೂ.ಎಸ್.ಎಸ್.ಬಿ. ರವರು ಮಾತನಾಡುತ್ತಾ, ಸದರಿ ದೂರಿಗೆ ಸಂಭಂದಿಸಿದಂತೆ ಸ್ಥಳ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳುತ್ತೇವೆ ಎಂದು ಸಭೆಗೆ ತಿಳಿಸಿದರು.
- ಶ್ರೀ ಗೋವಿಂದ ರಾಜುಲು ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಸೋಂಕು ಪರೀಕ್ಷೆಗಳ ಪರೀವೀಕ್ಷಣೆಯ ವೇಳೆಯಲ್ಲಿ ಸಣ್ಣಕ್ಕಿಬಯಲು ವ್ಯಾಪ್ತಿಯಲ್ಲಿನ 4ನೇ 'ಎ' 'ಬಿ' 'ಸಿ' ರಸ್ತೆಗಳಲ್ಲಿ ಕೊಳಚೆ ನೀರನ್ನು ರಸ್ತೆಬದಿ ಚರಂಡಿಗಳಿಗೆ ಬಿಡುತ್ತಿರುವುದಾಗಿ ಸಾರ್ವಜನಿಕರು

ಪು.ತಿ.ನೋ.

Scanned with CamScanner

ದೂರು ನೀಡಿರುತ್ತಾರೆ. ಆದುದರಿಂದ ಇದರ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಸಭೆಯಲ್ಲಿ ಹಾಜರಿದ್ದ ಶ್ರೀ ದಿನೇಶ್ ಕಾಮಗಾರಿ ಪರಿವೀಕ್ಷಕರು ಬಿ.ಡಬ್ಲ್ಯೂ.ಎಸ್.ಎಸ್.ಬಿ. ರವರಿಗೆ ತಿಳಿಸಿದರು.

7) <u>ಬೆಸ್ಕಾಂ ವಿಭಾಗದ ಬಗ್ಗೆ:-</u>

- ➢ ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಕಳೆದ ಸಭೆಯಲ್ಲಿ ತಿಳಿಸಿದಂತೆ ಮಾರುತಿನಗರದ 4ನೇ ಸಿ ಅಡ್ಡರಸ್ತೆಯಲ್ಲಿರುವ ಟ್ರಾನ್ಸ್‌ಫಾರ್ಮರ್ ಹತ್ತಿರ ರಸ್ತೆ ಬದಿಯಲ್ಲಿ ಮುರಿದ ಕಂಬವಿದ್ದು, ಅದನ್ನು ತೆರವುಗೊಳಿಸುವಂತೆ ಸಾರ್ವಜನಿಕರು ದೂರು ನೀಡಿರುವುದರಿಂದ ಅದರ ಬಗ್ಗೆ ಸೂಕ್ತ ಕ್ರಮ ತೆಗೆದುಕೊಳ್ಳುವಂತೆ ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ಯು.ಜಿ. ಕೇಬಲ್‌ಗಳನ್ನು ಅಳವಡಿಸುವ ಕಾಮಗಾರಿಗಳನ್ನು ತುರ್ತಾಗಿ ಪೂರ್ಣಗೊಳಿಸುವ ಬಗ್ಗೆ ತೆಗೆದುಕೊಂಡ ಕ್ರಮಗಳ ಬಗ್ಗೆ ವಿವರಣೆ ನೀಡಲು ಕೋರಿದರು.
- ➢ ಶ್ರೀ ಸಿದ್ದರಾಜು, ಸಹಾಯಕ ಅಭಿಯಂತರರು, ಬೆಸ್ಕಾಂ ರವರು ಮಾತನಾಡುತ್ತಾ, ಸದರಿ ದೂರುಗಳ ಬಗ್ಗೆ ಮೇಲಾಧಿಕಾರಿಗಳ ಗಮನಕ್ಕೆ ತಂದು ತ್ವರಿತವಾಗಿ ಬಗೆಹರಿಸಲಾಗುವುದೆಂದು ಸಭೆಗೆ ತಿಳಿಸಿದರು.

ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ಇಲಾಖೆಗಳ ಅಧಿಕಾರಿಗಳು ಸಭಾನಡವಳಿಗಳಿಗೆ ಅನುಸಾರವಾಗಿ ತಮ್ಮ ಇಲಾಖೆಗೆ ಸಂಬಂಧಿಸಿದ ದೂರುಗಳನ್ನು ಪಟ್ಟಿ ಮಾಡಿಕೊಂಡು ಸದರಿ ದೂರುಗಳನ್ನು ಸರಿಪಡಿಸಿರುವ ಬಗ್ಗೆ ಅಥವಾ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ದೃಢೀಕೃತ ಮಾಹಿತಿಗಳನ್ನು ತಪ್ಪದೇ **ವಾರ್ಡ್ ಕಮಿಟಿ ವಾರ್ಡ್-102 ವಾಟ್ಸ್ ಆಪ್ ಗ್ರೂಪ್** ನಲ್ಲಿ ಮತ್ತು ಪ್ರತಿ ವಾರ್ಡ್ ಸಮಿತಿ ಸಭೆಯಲ್ಲಿ ವರದಿ ಮಾಡಲು ನೋಡಲ್ ಅಧಿಕಾರಿಯವರು ಸೂಚಿಸುತ್ತಾ, ಸಭೆಯನ್ನು ಮುಕ್ತಾಯಗೊಳಿಸಲಾಯಿತು. ಸಭೆಯ ಕೊನೆಯಲ್ಲಿ ಸಮಿತಿ ಕಾರ್ಯದರ್ಶಿ ರವರು ಸಮಿತಿ ಸಭೆಗೆ ಆಗಮಿಸಿರುವ ಎಲ್ಲರಿಗೂ ವಂದಿಸಿದರು.

ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು,
ವಾರ್ಡ್ ಸಂಖ್ಯೆ-102

ನೋಡಲ್ ಅಧಿಕಾರಿಗಳು
ವಾರ್ಡ್ ಸಮಿತಿ, ವಾರ್ಡ್-102

<u>ಪ್ರತಿಯನ್ನು</u>

1. ಮಾನ್ಯ ವಲಯ ವಿಶೇಷ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
3. ಮಾನ್ಯ ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ತಾಂತ್ರಿಕ ಸಹಾಯಕರಿಗೆ ಸಲ್ಲಿಸಿದೆ.
4. ಮಾನ್ಯ ಆರೋಗ್ಯ ಅಧಿಕಾರಿಗಳು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
5. ಮಾನ್ಯ ಅಧೀಕ್ಷಕ ಅಭಿಯಂತರರು, (ಘನತ್ಯಾಜ್ಯ ನಿರ್ವಹಣೆ) ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
6. ಮಾನ್ಯ ಅರಣ್ಯಾಧಿಕಾರಿಗಳು, ಅರಣ್ಯ ವಿಭಾಗ ರವರಿಗೆ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
7. ಮಾನ್ಯ ಅಧೀಕ್ಷಕರು, ತೋಟಗಾರಿಕೆ ಇಲಾಖೆ ರವರ ಅವಗಾಹನೆಗೆ ತರಲು ಹಾಗೂ ಅಗತ್ಯ ಕ್ರಮಕ್ಕಾಗಿ ಸಹಾಯಕರಿಗೆ ಸಲ್ಲಿಸಿದೆ.
8. ವೈದ್ಯಕೀಯ ಆರೋಗ್ಯ ಅಧಿಕಾರಿಗಳು, (ಪಶ್ಚಿಮ ವಲಯ) ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
9. ಕಾರ್ಯಪಾಲಕ ಅಭಿಯಂತರರು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
10. ಕಂದಾಯ ಅಧಿಕಾರಿಗಳು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು ನಾಗಪುರ ಉಪವಿಭಾಗ ರವರಿಗೆ ಸೂಕ್ತ ಕ್ರಮವಹಿಸಲು ಸಲ್ಲಿಸಿದೆ.
12. ಸಹಾಯಕ ಕಂದಾಯ ಅಧಿಕಾರಿಗಳು ನಾಗಪುರ ಉಪವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
13. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪರಿಸರ ವಿಭಾಗ) ನಾಗಪುರ ಉಪವಿಭಾಗ ರವರ ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
14. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ವಿಭಾಗ ರವರಿಗೆ ಸೂಕ್ತ ಕ್ರಮ ವಹಿಸಲು ಸಲ್ಲಿಸಿದೆ.
15. ಎಲ್ಲಾ ಸಂಬಂಧಪಟ್ಟವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
16. ಕಛೇರಿಯ ಕಡತಕ್ಕೆ.

Scanned with CamScanner